ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು
**PAPER CLIPPINGS** 4

ಇಲಾಖೆ / ವಿಷಯ : DEPARTMENT / SUBJECT: ಸಂಸತ್ತು

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ದಿನಾಂಕ : DATE : 07/09/2021

# ಅಧಿವೇಶನ ಪ್ರಶ್ನೋತ್ತರಕ್ಕೆ 1 ತಾಸು ನಿಗದಿ



ಹುಬ್ಬಳ್ಳಿ: ಸಂಸತ್ತು ಅಧಿವೇಶನ ಸೆ.14ರಿಂದ ಆರಂಭವಾಗಲಿದ್ದು ಪ್ರಶ್ನೋತ್ತರ ವೇಳೆಯನ್ನು ಒಂದು ತಾಸಿಗೆ ನಿಗದಿ ಪಡಿಸಲಾಗಿದೆ ಎಂದು ಕೇಂದ್ರ ಸಚಿವ ಪ್ರಹ್ಲಾದ ಜೋಶಿ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿ, ಸೆ.14ರಿಂದ ಅ.1ರವರೆಗೆ ಅಧಿವೇಶನ ನಡೆಯಲಿದ್ದು ಲೋಕಸಭೆ, ರಾಜ್ಯಸಭೆ ಸದಸ್ಯರ ಆಪ್ತ ಕಾರ್ಯದರ್ಶಿಗಳು ಹಾಗೂ ಆಪ್ತ ಸಹಾಯಕರಿಗೆ ಅಧಿವೇಶನ ವೇಳೆ ಸಂಸತ್ತು ಪ್ರವೇಶಕ್ಕೆ ಅವಕಾಶ ಇಲ್ಲ. ಸಂಸತ್ತು ಅಧಿವೇಶನಕ್ಕೆ ತೃಣಮೂಲ ಕಾಂಗ್ರೆಸ್ ವಿರೋಧ ವ್ಯಕ್ತಪಡಿಸುತ್ತಿದೆ. ಇದೇ ಸಂದಿಗ್ಧ ಸ್ಥಿತಿಯಲ್ಲಿಯೇ ಪಶ್ಚಿಮ ಬಂಗಾಳ ಹಾಗೂ ರಾಜಸ್ಥಾನದಲ್ಲಿ ವಿಧಾನಸಭೆ ಅಧಿವೇಶನ ಒಂದು ದಿನ ನಡೆಸಿ ಎಲ್ಲಾ ಬಿಲ್‌ಗಳನ್ನು ಪಾಸ್ ಮಾಡಿಕೊಂಡಿದ್ದಾರೆ. ಆದರೆ, ಸಂಸತ್ತು ಅಧಿವೇಶನಕ್ಕೆ ವಿರೋಧ ವ್ಯಕ್ತಪಡಿಸುತ್ತಿದ್ದಾರೆ. ಇಲ್ಲಿನ ಚನ್ನಮ್ಮ ವೃತ್ತದಲ್ಲಿ ಫ್ಲೈ ಓವರ್ ನಿರ್ಮಾಣಕ್ಕೆ ಈಗಾಗಲೇ ಕೇಂದ್ರ ಸರ್ಕಾರ ಅನುಮತಿ ನೀಡಿ ಆದೇಶ ಹೊರಡಿಸಿದೆ. ಮೊದಲ ಹಂತದಲ್ಲಿ 300 ಕೋಟಿ ರೂ. ವೆಚ್ಚದಲ್ಲಿ ಕಾಮಗಾರಿ ನಡೆಯಲಿದ್ದು, ಈ ಕಾಮಗಾರಿಗೆ ಒಟ್ಟು 600 ಕೋಟಿ ರೂ. ಯೋಜನೆ ರೂಪಿಸಲಾಗಿದೆ ಎಂದರು.